ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE 3/7/2020

# ಮಂಗಳೂರು ಶಾಸಕ ಭರತ್ ಶೆಟ್ಟಿ, ಡಿಎಚ್‌ಒಗೂ ಕೊರೋನಾ ಸೋಂಕು!

ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೊರೋನಾ ವೈರಸ್ ಆರ್ಭಟ ಮುಂದುವರಿದಿದ್ದು ಇದೀಗ ಮಂಗಳೂರು ಉತ್ತರ ಶಾಸಕ ಡಾ.ಭರತ್ ಶೆಟ್ಟಿಗೂ



ಸೋಂಕು ತಗುಲಿದೆ. ಈ ವಿಷಯವನ್ನು ಸ್ವತಃ ಅವರೇ ಟ್ವೀಟರ್‌ನಲ್ಲಿ ಬಹಿರಂಗಪಡಿಸಿದ್ದಾರೆ. ವಾರದ ಹಿಂದೆ ಶಾಸಕರು ಬೆಂಗಳೂರಿಗೆ ತೆರಳಿದ್ದಾಗ ಅಥವಾ ಮಂಗಳೂರಿನಲ್ಲಿ ಓಡಾಟ ನಡೆಸಿದ್ದಾಗ ಸೋಂಕು ತಗಲಿರಬಹುದು ಎನ್ನಲಾಗಿದೆ. ಇದೇ ವೇಳೆ ಕೊರೋನಾ ವಾರಿಯರ್ ಆಗಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಆರೋಗ್ಯಾಧಿಕಾರಿ, ಕೋವಿಡ್ ಲ್ಯಾಬ್ ಅಧಿಕಾರಿ, ಆರೋಗ್ಯ ಇಲಾಖೆಯ ಇತರೆ ಅಧಿಕಾರಿಗಳೂ ಸೋಂಕಿತರಾಗಿದ್ದಾರೆ. ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೋಂಕಿತ ಖಾಸಗಿ ಆಸ್ಪತ್ರೆ ವೈದ್ಯರ ಸಂಪರ್ಕದಿಂದ ತಗಲಿರಬಹುದು ಎಂದು ಶಂಕಿಸಲಾಗಿದೆ.